ಅ) ಕಳೆದ 3 ವರ್ಷಗಳ ಅವಧಿಯಲ್ಲಿ ಬೀದರ್ ಜಿಲ್ಲೆಯ ಯಾವ ಯಾವ ಮತ ಕ್ಷೇತ್ರಗಳಲ್ಲಿ ಪಶುವೈದ್ಯ ಶಾಲೆಗಳನ್ನು ಪ್ರಾರಂಭಿಸಲಾಗಿದೆ (ತಾಲ್ಲೂಕುವಾರು ವಿವರಗಳನ್ನು ನೀಡುವುದು)?

ಆ) ಹುಲಸೂರು ಮತ ಕ್ಷೇತ್ರಕ್ಕೆ ಹೊಸ ಪಶುವೈದ್ಯ ಶಾಲೆಗಳು ಅಗತ್ಯವಿದ್ದು, ಈ ಮತ ಕ್ಷೇತ್ರದಲ್ಲಿ ಪ್ರಸಕ್ತ ಸಾಲಿನಲ್ಲಿ ಪಶುವೈದ್ಯ ಶಾಲೆಗಳನ್ನು ಮಂಜೂರು ಮಾಡಲಾಗುವುದೇ?

ಇ) ಈ ಸಾಲಿನಲ್ಲಿ ಜಿಲ್ಲೆಯ ಯಾವ ಯಾವ ಗ್ರಾಮಗಳಲ್ಲಿ ಹೊಸ ಪಶುವೈದ್ಯ ಶಾಲೆಗಳನ್ನು ತೆರೆಯುವ ಸಲುವಾಗಿ ಪ್ರಸ್ತಾವನೆ ಸರ್ಕಾರದ ಮುಂದಿದೆ?

ಶ್ರೀ ಎಂ. ಮಹದೇವ್ (ಪಶು ಸಂಗೋಪನೆ ಮತ್ತು ಸಕ್ಕರೆ ಸಚಿವರು):

ಅ) ಕಳೆದ 3 ವರ್ಷಗಳಿಂದ ಯಾವುದೇ ಹೊಸ ಸಂಸ್ಥೆಗಳನ್ನು ಪ್ರಾರಂಭಿಸಿರುವುದಿಲ್ಲ. ಆದಾಗ್ಯೂ ಜಿಲ್ಲೆಯಲ್ಲಿ 102 ಪಶುವೈದ್ಯ ಸಂಸ್ಥೆಗಳು ಈ ಕೆಳಕಂಡಂತೆ ಇವೆ:

5 ಪಶು ಆಸ್ಪತ್ರೆಗಳು,
42 ಪಶು ಚಿಕಿತ್ಸಾಲಯಗಳು,
42 ಪ್ರಾಥಮಿಕ ಪಶು ಚಿಕಿತ್ಸಾಲಯಗಳು,
8 ಕೃತಕ ಗರ್ಭಧಾರಣಾ ಕೇಂದ್ರಗಳು,
5 ಸಂಚಾರಿ ಪಶು ಚಿಕಿತ್ಸಾಲಯಗಳು.

ಆ) ಇಲ್ಲ

ಇ) ಪ್ರಸ್ತಾವನೆಯಿಲ್ಲ

ತಡೆಗೋಡೆ ನಿರ್ಮಾಣ ಕಾಮಗಾರಿ

1343(1509) ಶ್ರೀ ಸದಾನಂದ ಗೌಡ ಡಿ.ವಿ. (ಪುತ್ತೂರು) : ಮಾನ್ಯ ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ತಡೆಗೋಡೆ ನಿರ್ಮಾಣಕ್ಕೆ ಮಾಡಿದ ಖರ್ಚಿನ ಒಟ್ಟು ಮೊತ್ತವೆಷ್ಟು; (ವರ್ಷವಾರು ವಿವರ ಒದಗಿಸುವುದು)?

ಆ) ಮಂಜೂರಾದ ಕಾಮಗಾರಿಗಳಲ್ಲಿ ವಿವಿಧ ಹಂತಗಳಲ್ಲಿ ಇರುವ ಕಾಮಗಾರಿಗಳು ಎಷ್ಟು?

ಇ) ಕೆಲವು ಕಾಮಗಾರಿಗಳು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಬಂದಿದ್ದಲ್ಲಿ ಈ ಬಗ್ಗೆ ಸರಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ವಸಂತ ವಿ. ಸಾಲಿಯಾನ (ಮೀನುಗಾರಿಕೆ ಮತ್ತು ಬಂದರು ಸಚಿವರು):

ಅ) 1999-2000 - ರೂ. 910.54 ಲಕ್ಷಗಳು
2000-2001 - ರೂ. 659.00 ಲಕ್ಷಗಳು
2001-2002 - ರೂ. 395.44 ಲಕ್ಷಗಳು

ಆ) ಪ್ರಗತಿಯಲ್ಲಿರುವ ಕಾಮಗಾರಿಗಳು - 4
ಪ್ರಾರಂಭಿಸಬೇಕಾದ ಕಾಮಗಾರಿಗಳು - 2
ಅರ್ಧಕ್ಕೆ ನಿಂತ ಕಾಮಗಾರಿಗಳು - 6

ಇ) ಕೆಲವು ಕಾಮಗಾರಿಗಳು ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆ; ಈ ಕಾಮಗಾರಿಗಳ ವಿವರಗಳನ್ನು ಪರಿಶೀಲಿಸಿ ಮುಂದುವರಿಸಬೇಕಾಗಿರುವುದರಿಂದ ವಿಳಂಬವಾಗಿದ್ದು, ಪರಿಶೀಲಿಸಿದ ನಂತರ ಸೂಕ್ತ ಕ್ರಮ ಕೈಗೊಳ್ಳಲಾಗುವುದು.